# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1249
ಸದಸ್ಯರ ಹೆಸರು : ಎಸ್. ಎಲ್. ಧರ್ಮೇಗೌಡ
ಉತ್ತರಿಸಬೇಕಾದ ದಿನಾಂಕ : 20.12.2018
ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ಪೂರೈಸುತ್ತಿರುವ ಆಹಾರವು ತೀರಾ ಕಳಪೆ ಮಟ್ಟದಾಗಿರುವುದಲ್ಲದೇ ನಿಗದಿತ ಸಮಯದಲ್ಲಿ ಪೂರೈಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ. |
| ಆ) | ಆಹಾರ ಕಳಪೆ ಮಟ್ಟದ್ದಾಗಿರಲು ಮತ್ತು ನಿಗದಿತ ಸಮಯದಲ್ಲಿ ಪೂರೈಸದಿರಲು ಕಾರಣಗಳೇನು; (ಮಾಹಿತಿ ನೀಡುವುದು) | ಗುಣ ಮಟ್ಟದ ಆಹಾರ ಸಾಮಗ್ರಿಗಳನ್ನು ನಿಗದಿತ ಸಮಯದಲ್ಲಿ ಪೂರೈಸಲಾಗುತ್ತಿದೆ. |
| ಇ) | ಹಾಗಿದ್ದಲ್ಲಿ, ಜಿಲ್ಲೆಯಲ್ಲಿರುವ ಅಂಗನವಾಡಿಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರ ವಿವರಗಳನ್ನು ತಾಲ್ಲೂಕುವಾರು ನೀಡುವುದು; | ಅಂಗನವಾಡಿ ಕೇಂದ್ರಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳ ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.<br>1) ಎಂ.ಎಸ್.ಪಿ.ಟಿ.ಸಿ ಘಟಕ ತರೀಕೆರೆ ಇವರಿಂದ ತರೀಕೆರೆ ಮತ್ತು ಕಡೂರು ಶಿಶು ಅಭಿವೃದ್ಧಿ ಯೋಜನೆಗೆ.<br>2) ಎಂ.ಎಸ್.ಪಿ.ಟಿ.ಸಿ. ಘಟಕ ಕೊಪ್ಪ ಇವರಿಂದ ಕೊಪ್ಪ, ಶೃಂಗೇರಿ ಮತ್ತು ಎನ್.ಆರ್.ಪುರ ಶಿಶು ಅಭಿವೃದ್ಧಿ ಯೋಜನೆಗೆ.<br>3) ಎಂ.ಎಸ್.ಪಿ.ಟಿ.ಸಿ. ಘಟಕ ಚಿಕ್ಕಮಗಳೂರು ಇವರಿಂದ ಚಿಕ್ಕಮಗಳೂರು ಮತ್ತು ಮೂಡಿಗೆರೆ ಶಿಶು ಅಭಿವೃದ್ಧಿ ಯೋಜನೆಗೆ ಆಹಾರ ಸಾಮಗ್ರಿಗಳನ್ನು ಪಡೆಯಲಾಗುತ್ತಿದೆ. |
| ಈ) | ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರು ಆಹಾರ ಖರೀದಿಸುತ್ತಿರುವ ಆಹಾರ ಸಾಮಾಗ್ರಿಗಳ ಬೆಲೆಗೂ ಹಾಗೂ ಅಂದಿನ ಎ.ಪಿ.ಎಂ.ಸಿ. ಮಾರುಕಟ್ಟೆ ಬೆಲೆಗೂ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಮೇಲ್ವಿಚಾರಣಾ ಸಮಿತಿಯು ಎ.ಪಿ.ಎಂ.ಸಿ ದರವನ್ನು ಪಡೆದು ಈ ಸಗಟು ಮಾರಾಟ ದರಗಳಿಗೆ ಸಾಗಾಣಿಕೆ ವೆಚ್ಚ, ಎಂ.ಎಸ್.ಪಿ.ಟಿ.ಸಿ. ಗಳ ಲಾಭಾಂಶ, ಉತ್ಪಾದನಾ ವೆಚ್ಚ (ಶುಚಿಗೊಳಿಸುವುದು, ಪ್ಯಾಕಿಂಗ್), ವೇಸ್ಟೇಜ್, ಅನ್ವಯಿಸುವ ತೆರಿಗೆ ಇವುಗಳನ್ನು ಸೇರಿಸಿ ದರಗಳನ್ನು ನಿಗದಿಪಡಿಸಲಾಗುತ್ತಿದೆ. |
| ಉ) | ಹಾಗಿದ್ದಲ್ಲಿ, ಮಾರುಕಟ್ಟೆ ಬೆಲೆಗಿಂತ ಕಡಿಮೆ ದರದಲ್ಲಿ ಕಳಪೆ ಆಹಾರ ಸಾಮಗ್ರಿಗಳನ್ನು ಖರೀದಿಸಿ ಪೂರೈಸುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು) | ಆಹಾರ ಪದಾರ್ಥಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಗುಣಮಟ್ಟದ ಬಗ್ಗೆ ವಿಶ್ಲೇಷಣೆಗೆ ಒಳಪಡಿಸಿ ಉತ್ತಮ ಆಹಾರ ಪದಾರ್ಥಗಳನ್ನು ಪಡೆಯಲಾಗುತ್ತಿದೆ. |

ಸಂ:ಮಮಇ 361 ಐಸಿಡಿ 2018

(ಡಾ॥ ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.